CC No.2335/2022
CW-5  PW-5

**ಪ್ರಧಾನ ವ್ಯವಹಾರ ನ್ಯಾಯಾಧೀಶರು ಮತ್ತು  ಜೆ.ಎಂ.ಎಫ್.ಸಿ ನ್ಯಾಯಾಲಯ, ಸೊರಬ**

**ಸಿ ಸಿ ನಂ.  2335/2022**

| | | |
|---|---|---|
| **ಹೆಸರು** | :- | **ನಾಗರಾಜ** |
| **ತಂದೆಯ ಹೆಸರು** | :- | **ಶಾಂತಪ್ಪ ಜೆ** |
| **ವಯಸ್ಸು** | :- | **55 ವರ್ಷ** |
| **ಉದ್ಯೋಗ** | :- | **ಖಾಸಗಿ ಕೆಲಸ** |
| **ಸ್ಥಳ** | :- | **ಸೊರಬ** |

**ದಿನಾಂಕಃ 13.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ದಿಃ 14.02.2022 ರಂದು ನಾನು ಚಿಕ್ಕಪೇಟೆಯಲ್ಲಿ ಬೈಕಿನಲ್ಲಿ ಬರುತ್ತಿರುವಾಗ ಚಾಸಾ-4 ರವರು ನನ್ನನ್ನು ನಿಲ್ಲಿಸಿ ಗಲಾಟೆ ಆಗುತ್ತಿದೆ ನಿಲ್ಲಿಸೋಣ ಬನ್ನಿ ಎಂದು ಹೇಳಿದಾಗ ನಾನು ಹೋಗಿ ನೋಡಿದಾಗ ಚಾಸಾ-1 ರವರು ನೆಲಕ್ಕೆ ಬಿದ್ದಿರುತ್ತಾರೆ. ಆರೋಪಿತರು ಚಾಸಾ-1 ರವರನ್ನು ಕೈಯಿಂದ ಹೊಡೆದು, ಕಾಲಿನಿಂದ ತುಳಿಯುತ್ತಿದ್ದು, ಕೆಟ್ಟ ಶಬ್ದಗಳಿಂದ ಬೈಯ್ಯುತ್ತಿದ್ದರು. ನಾನು ಮತ್ತು ಚಾಸಾ-4 ರವರು ಗಲಾಟೆಯನ್ನು ಬಿಡಿಸಿ ಕಳುಹಿಸಿರುತ್ತೇವೆ. ನಂತರ ಚಾಸಾ-1 ರವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ನಾನು ದಿಃ 23.02.2022 ರಂದು ಪೊಲೀಸರು ನಾನು ಗಲಾಟೆಯನ್ನು ನೋಡಿದ ಬಗ್ಗೆ, ಗಲಾಟೆಯನ್ನು ಬಿಡಿಸಿದ ಬಗ್ಗೆ ಕೇಳಿರುತ್ತಾರೆ. ನಾನು

ಹೇಳಿಕೆ ನೀಡಿರುತ್ತೇನೆ. ಆ ದಿನ ಚಾಸಾ–1 ರವರ ಮೇಲೆ ಹಲ್ಲೆ ಮಾಡಿದ ಆರೋಪಿತರನ್ನು ನಾನು ಈ ದಿನ ನ್ಯಾಯಾಲಯದ ಮುಂದೆ ನೋಡಿ ಗುರುತಿಸಿರುತ್ತೇನೆ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ಭಾಗಶಃ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲಿಗೆ ಅನುಮತಿ ಕೋರಿದ್ದು, ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದ ಕಾರಣ ಪಾಟಿ ಸವಾಲಿಗೆ ಅನುಮತಿ ನೀಡಲಾಯಿತು**).

**ಪಾಟಿ ಸವಾಲುಃ ಮಾನ್ಯ ಸ.ಸ.ಅಭಿಯೋಜಕವರಿಂದಃ**

ಆರೋಪಿತರು ಚಾಸಾ–1 ರವರ ಮೇಲೆ ಹಲ್ಲೆ ಮಾಡಿ ಅವರ ಮಾನಕ್ಕೆ ಕುಂದುಂಟಾಗುವಂತೆ ನಡೆದುಕೊಂಡಿರುತ್ತಾರೆ. ಚಾಸಾ–2 ರವರಿಗೆ ಆರೋಪಿತರು ಹಲ್ಲೆ ಮಾಡಿರುತ್ತಾರೆ ಅಂದರೆ ಸರಿ. ಆರೋಪಿತರು ಸ್ಥಳದಿಂದ ಹೋಗುವಾಗ ಚಾಸಾ–1 ರವರಿಗೆ ಜೀವ ಬೆದರಿಕೆ ಹಾಕಿರುತ್ತಾರೆ ಅಂದರೆ ಸರಿ.

**ಪಾಟಿ ಸವಾಲುಃ ಆರೋಪಿ ಪರ ಶ್ರೀ.ಎ.ಸಿ.ವೈ. ವಕೀಲರಿಂದಃ**

ಚಾಸಾ–1 ರವರ ಮನೆಯಿಂದ ಕಾರ ಶೆಡ್ ಗೂ ಎಷ್ಟು ದೂರ ಆಗುತ್ತದೆ ಅಂದರೆ ಸಾಕ್ಷಿಯು ಅಂದಾಜು 100 ಮೀ. ಆಗುತ್ತದೆ ಎಂದು ಉತ್ತರಿಸುತ್ತಾರೆ. ನಾನು ಪೊಲೀಸರ ಮುಂದೆ ನೀಡಿದ ಹೇಳಿಕೆಯ ಸಂಗತಿಗಳು ನನಗೆ ಗೊತ್ತಿರುವುದಿಲ್ಲ. ನಾನು ಪೊಲೀಸರ ಮುಂದೆ ಚಿಕ್ಕಪೇಟೆಯಲ್ಲಿರುವ ಕಾರ್ ಶೆಡ್ ನಲ್ಲಿ ಗಲಾಟೆ ಆಗಿರುತ್ತದೆ ಎಂದು ಹೇಳಿಕೆ ನೀಡಿರುತ್ತೇನೆ. ನಾನು ಈ ದಿನ ನ್ಯಾಯಾಲಯದ ಮುಂದೆ ಚಾಸಾ–4 ರವರು ನನ್ನ ಬೈಕನ್ನು ತೆಡದು ಗಲಾಟೆಯನ್ನು ಬಿಡಿಸೋಣ ಬನ್ನಿ ಎಂದು ಕರೆದಿರುತ್ತಾರೆ ಎಂದು

ಹೇಳುತ್ತಿದ್ದೇನೆ ಅಂದರೆ ಸರಿ. ಪ್ರಸನ್ನ ಎನ್ನುವವರು ನನ್ನ ಆತ್ಮೀಯ ಗೆಳೆಯ ಅಂದರೆ ಸರಿ. ನಾನು ಹೇಳಿದಂತೆ ಆರೋಪಿತರು ಚಾಸಾ–1 ರವರಿಗೆ ಯಾವುದೇ ಹಲ್ಲೆ ಮಾಡಿರುಕವುದಿಲ್ಲ. ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ ಅಂದರೆ ಸರಿಯಲ್ಲ. ಆರೋಪಿತರು ಚಾಸಾ–1 ರವರಿಗೆ ಜೀವ ಬೆದರಿಕೆ ಹಾಕಿರುವುದಿಲ್ಲ ಅಂದರೆ ಸರಿಯಲ್ಲ. ನಾನು ಮೇಲೆ ಹೇಳಿದಂತೆ ಘಟನಾ ಸ್ಥಳಕ್ಕೆ ಬಂದಿರುವುದಿಲ್ಲ ಅಂದರೆ ಸರಿಯಲ್ಲ. ಚಾಸಾ–2 ರವರು ಮತ್ತು ನಾನು ಸ್ನೇಹಿತರಾಗಿರುವುದರಿಂದ ಅವರ ಪರವಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**